# 8 ಗಂಟೆಯಿಂದ ಮತ ಎಣಿಕೆ ಆರಂಭ

ಸಂ.ಕ.ಸಮಾಚಾರ,ಮಂಗಳೂರು

ಎನ್‌ಐಟಿಕೆಯ ಸ್ಟ್ರಾಂಗ್ ರೂಂನಲ್ಲಿ 1860 ಮತಗಟ್ಟೆಯ ಇವಿಎಂ, ವಿವಿಪಾಟ್, ದಾಖಲೆಗಳನನು ಕೇಂದ್ರೀಯ ಅರೆಸೇನಾ ಪಡೆಯ ಸಿಬ್ಬಂದಿಗಳ ಸುಪರ್ಧಿಯಲ್ಲಿ ಇಡಲಾಗಿದ್ದು, ಮೇ 13ರ ಬೆಳಗ್ಗೆ 8 ಗಂಟೆಗೆ ಮತ ಎಣಿಕೆಯ ಕಾರ್ಯ ಆರಂಭಗೊಳ್ಳಲಿದೆ ಎಂದು ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ರವಿಕುಮಾರ್ ಎಂ.ಆರ್. ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಇವಿಎಂ ಮತ್ತು ಅಂಚೆ ಮತಪತ್ರ ಸೇರಿದಂತೆ ಚುನಾವಣಾ ದಾಖಲೆಗಳನ್ನು ಇಡಲಾದ ಭದ್ರತಾ ಹೊರಡಿಗಳಿರುವ ಮತ ಎಣಿಕೆ ಕೇಂದ್ರದ ಆವರಣದ 100 ಮೀ ವ್ಯಾಪ್ತಿಯೊಳಗೆ ಅನಧಿಕೃತ ವ್ಯಕ್ತಿಗಳು ಮತ್ತು ವಾಹನಗಳು ಪ್ರವೇಶಿಸದಂತೆ ತಡೆಬೇಲಿ ನಿರ್ಮಿಸಿ ಭದ್ರತಾ ವಲಯ ಸ್ಥಾಪಿಸಲಾಗಿದೆ. ಮತ ಎಣಿಕೆಯ ಪ್ರವೇಶದ್ವಾರದ ನಿರ್ಮಿಸಿ ಅದನ್ನು ಚುನಾವಣಾಧಿಕಾರಿ/ಚುನಾವಣಾಧಿಕಾರಿ ಇವರಿಂದ ನಿಯೋಜಿತ ಅಧಿಕಾರಿ/ಸಿಬ್ಬಂದಿಯವರು ಹೊಂದಿರುವ ಭಾಚಿತ್ರವಿರುವ ಗುರುತಿನ ಚೀಟಿಯನ್ನು ಪರಿಶೀಲಿಸಿ ಅನುಮತಿಸುವ ಬಗ್ಗೆ ಸ್ಥಳೀಯ ಪೊಲೀಸರನ್ನು ಕರ್ತವ್ಯದಲ್ಲಿರಿಸಲಾಗಿದೆ ಎಂದರು.

ರಾಜ್ಯ ಶಸ್ತ್ರಸಜ್ಜಿತ ಪೊಲೀಸ್ ಪಡೆ, ಭದ್ರತೆಗೆ ಕೇಂದ್ರ ಶಸ್ತ್ರಸಜ್ಜಿತ ಪೊಲೀಸ್ ಪಡೆಗಳನ್ನು ವಿಯೋಜಿಸಲಾಗಿದ್ದು, ಮತ ಎಣಿಕೆ ಕೊಠಡಿಯನ್ನು ಪ್ರವೇಶಿಸುವ ಸಿಬ್ಬಂದಿ/ಎಣಿಕೆ ಏಜೆಂಟರನ್ನು ಉಪಕರಣಗಳನ್ನು ಜೋಡಿಕೊಳ್ಳಲಾಗುವದು. ಮತ ಎಣಿಕೆ ಕೇಂದ್ರದೊಳಗೆ ಮೊಬೈಲ್ ಐಪ್ಯಾಡ್, ಲ್ಯಾಪ್‌ಟಾಪ್ ಸೇರಿದಂತೆ ಎಲೆಕ್ಟ್ರಾನಿಕ್ ಉಪಕರಣ ಮತ್ತು ಆಡಿಯೋ ವೀಡಿಯೋ ರೆಕಾರ್ಡಗಳನ್ನು ತೆಗೆದುಕೊಂಡು ಹೋಗುವದನ್ನು ನಿಷೇಧಿಸಲಾಗಿದೆ ಎಂದರು.

## 144ರನ್ವಯ ನಿಷೇಧಾಜ್ಞೆ

ಮತ ಎಣಿಕೆ ಮುಕ್ತ ಹಾಗೂ ಶಾಂತಿಯುತವಾಗಿ ನಡೆಸುವ ದೃಷ್ಟಿಯಿಂದ ಹಾಗೂ ಜಿಲ್ಲೆಯಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಡುವ ದೃಷ್ಟಿಯಿಂದ ಮೇ 13ರ ಬೆಳಗ್ಗೆ 5 ಗಂಟೆಯಿಂದ ಮಧ್ಯರಾತ್ರಿ 12 ಘಂಟೆವರೆಗೆ ಮತ ಎಣಿಕೆ ಕೇಂದ್ರವು ಸೇರಿದಂತೆ ಜಿಲ್ಲೆಯಾದ್ಯಂತ ಕಾನೂನು ಸೇರುವದನ್ನು ವಿಜಯೋತ್ಸವ ಮಾಡುವದು, ಮರವಣಿಗೆ ನಡೆಸುವುದನ್ನು ನಿಷೇಧಿಸುವ ಸಲುವಾಗಿ 144ರನ್ವಯ ಜಿಲ್ಲೆಯಾದ್ಯಂತ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ.

ಅಂಚೆ ಮತಪತ್ರಗಳ ಮತ ಎಣಿಕೆ: ಈಬಾರಿ ಅಂಚೆ ಮತದಾನದ ಮೂಲಕ ವಿಶೇಷ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಒಟ್ಟು 12313 ಅಂಚೆ ಮತಪತ್ರಗಳು ಸ್ವೀಕೃತವಾಗಿರುತ್ತದೆ.

541 ಸೇವಾಮತದಾರರಿಗೆ ಅಂಚೆ ಮತಪತ್ರವನ್ನು ಇಟಿಪಿಬಿಎಸ್ ಮೂಲಕ ಕಳುಹಿಸಲಾಗಿದ್ದು, ಹಾಗೂ 10035 ಕರ್ತವ್ಯ ನಿರತ ಸಿಬ್ಬಂದಿಗೆ ಅಂಚೆ ಮತಪತ್ರಗಳನ್ನು ನೀಡಲಾಗಿದ್ದು, ಬೆಳಗ್ಗೆ 8 ಗಂಟೆವರೆಗೆ ಸ್ವೀಕೃತವಾದ ಎಲ್ಲಾ ಅಂಚೆ ಮತಪತ್ರಗಳನ್ನು ಎಣಿಕೆ ಕಾರ್ಯ ನಡೆಯಲಿದೆ. ಇದಾದ 30 ನಿಮಿಷದ ಬಳಿಕ ಇವಿಎಂನಲ್ಲಿ ದಾಖಲಾದ ಮತಗಳ ಎಣಿಕೆ ಆರಂಭಗೊಳ್ಳಲಿದೆ.

ಎಣಿಕೆ ಟೇಬಲ್‌ಗೆ ಮತ ಎಣಿಕೆ ಮೇಲ್ವಿಚಾರಕರು, ಸಹಾಯಕ ಸಿಬ್ಬಂದಿ ಮತ್ತು ಮೈಕ್ರೋ ವೀಕ್ಷಕರನ್ನು ನೇಮಿಸಲಾಗಿದೆ ಎಂದರು.

## ಸಿಸಿ ಟಿವಿ ವೆಬ್‌ಕಾಸ್ಟಿಂಗ್

ಜಿಲ್ಲೆಯಲ್ಲಿ 1860 ಮತಗಟ್ಟೆಗಳಿದ್ದು, ಗರಿಷ್ಠ 18 ಎಣಿಗೆ ಮುತ್ತುಗಳು ಬರುತ್ತವೆ. ಬೆಳ್ತಂಗಡಿ 18 ಸುತ್ತು, ಮೂಡುಬಿದರೆ 16, ಮಂಗಳೂರು ಉತ್ತರ 18, ಮಂಗಳೂರು ದಕ್ಷಿಣ 18, ಮಂಗಳೂರು 15, ಬಂಟ್ವಾಳ 18, ಪುತ್ತೂರು 16, ಸುಳ್ಯ 17 ಸುತ್ತು ಮತ ಎಣಿಕೆ ನಡೆಯಲಿದೆ.

ಮತ ಎಣಿಕೆ ಕೇಂದ್ರದಲ್ಲಿ ಒಟ್ಟು 112 ಟೇಬಲ್‌ಗಳನ್ನು ಅಳವಡಿಸಿದ್ದು, ಎಲ್ಲಾ ಟೇಬಲ್‌ಗಳಿಗೂ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗುವುದು. ಪ್ರತೀ ಮತೆಣಿಕೆ ಕಾರ್ಯವನ್ನು ಸಿಸಿ ಟಿವಿ ವೆಬ್‌ಕಾಸ್ಟಿಂಗ್ ಮೂಲಕ ರಾಜ್ಯ ಹಾಗೂ ಕೇಂದ್ರ ಚುನಾವಣಾಧಿಕಾರಿಗಳು ನೇರ ವೀಕ್ಷಣೆಯಲ್ಲಿರುತ್ತಾರೆ ಎಂದ ಅವರು ಪೋಸ್ಟಲ್ ಮತ ಎಣಿಕೆಗೆ 40 ಟೇಬಲ್‌ಗಳನ್ನು ಅಳವಡಿಸಿದ್ದು, ಅದಕ್ಕೆ ಪ್ರತ್ಯೇಕವಾಗಿ ಎಆರ್‌ಓ ಅಧಿಕಾರಿಗಳನ್ನು ನೇಮಿಸಲಾಗುವುದು ಎಂದು ಹೇಳಿದರು.

## ಮದ್ಯ ಮಾರಾಟ ನಿಷೇಧ

ಮತ ಎಣಿಕೆಯನ್ನು ಮುಕ್ತ ಹಾಗೂ ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಮೇ 12ರ ಮಧ್ಯರಾತ್ರಿಯಿಂದ ಮೇ 13ರ ಮಧ್ಯರಾತ್ರಿವರೆಗೆ ಮದ್ಯಪಾನ ಮಾರಾಟವನ್ನು ನಿಷೇಧಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ 6 ತಿಂಗಳ ಸೆರೆವಾಸ, ರೂ.2000 ದಂಡನೆ ಅಥವಾ ಅವೆರಡೂ ಒಳಗೊಂಡಂಕ ಶಿಕ್ಷೆಗೆ ಒಳಪಡಿಸಲಾಗುವುದು.

Samyuktha Karnataka, Date: 13/05/23, p, no-02